ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 : ಮೇ 20, 2020**

## ಪತ್ರಿಕಾ ಪ್ರಕಟಣೆ

### ಪಕ್ಷಾಂತರ ನಿಷೇಧ ನಿಯಮಾವಳಿ ರೂಪಿಸಲು ತಜ್ಞರಿಂದ ಅಭಿಪ್ರಾಯ ಆಹ್ವಾನ

ಬೆಂಗಳೂರು, ಮೇ 20 ( ಕರ್ನಾಟಕ ವಾರ್ತೆ )

ಪಕ್ಷಾಂತರ ನಿಷೇಧಕ್ಕೆ ಸಂಬಂಧಿಸಿದಂತೆ ಸಂವಿಧಾನದ ಹತ್ತನೇ ಅನುಸೂಚಿಯಲ್ಲಿ ರಚಿಸಲಾಗಿರುವ ನಿಯಮಾವಳಿಗಳಲ್ಲಿನ ಅವಕಾಶಗಳು ಚರ್ಚೆಯ ವಿಷಯವಾಗಿರುವುದರಿಂದ ಸದರಿ ಅನುಸೂಚಿ ಹಾಗೂ ನಿಮಮಾವಳಿಗಳನ್ನು ಪರಿಶೀಲಿಸಲು ಲೋಕಸಭಾಧ್ಯಕ್ಷರು ಹಾಗೂ ಅಖಿಲ ಭರತ ಪೀಠಾಸೀನಾಧಿಕಾರಿಗಳ ಸಮ್ಮೇಳನಾಧ್ಯಕ್ಷರಾದ ಓಂ. ಬಿರ್ಲಾರವರು ರಾಜಸ್ಥಾನ ವಿಧಾನ ಸಭಾಧ್ಯಕ್ಷರಾದ ಡಾ. ಸಿ.ಪಿ.ಜೋಷಿ ರವರ ಅಧ್ಯಕ್ಷತೆಯಲ್ಲಿ, ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗೆಡೆ ಕಾಗೇರಿ ಹಾಗೂ ಒಡಿಶಾ ವಿಧಾನಸಭೆಯ ಸಭಾಧ್ಯಕ್ಷರಾದ ಡಾ. ಸೂರ್ಜ್ಯ ನಾರಾಯಣ ಪಾತ್ರೊ ರವರುಗಳನ್ನೊಳಗೊಂಡಂತೆ ಒಂದು ಸಮಿತಿಯನ್ನು ರಚಿಸಿರುತ್ತಾರೆ. ಸದರಿ ಸಮಿತಿಯು ಪರಿಶೀಲನಾ ಕಾರ್ಯವನ್ನು ಕೈಗೆತ್ತಿಕೊಳ್ಳಲಿರುವುದರಿಂದ ಈ ದಿಸೆಯಲ್ಲಿ ಕಾನೂನು ತಜ್ಞರಿಂದ, ಅಭಿಪ್ರಾಯ ಪಡೆಯುವುದು ಸೂಕ್ತವೆಂದು ಭಾವಿಸಲಾಗಿದೆ. ಈ ದಿಸೆಯಲ್ಲಿ ಅಭಿಪ್ರಾಯವನ್ನು ನೀಡಬೇಕೆಂದು ಇಚ್ಛಿಸುವವರು ತಮ್ಮ ಅಭಿಪ್ರಾಯವನ್ನು ಶ್ರೀಮತಿ ಎಂ.ಕೆ. ವಿಶಾಲಾಕ್ಷಿ, ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ, ಕೊಠಡಿ ಸಂಖ್ಯೆ–121, ಮೊದಲನೆ ಮಹಡಿ, ವಿಧಾನಸೌಧ,ಬೆಂಗಳೂರು–560001. ಫ್ಯಾಕ್ಸ್: 080–22258301, ಇ–ಮೇಲ್: **secy-kla-kar@nic.in** ವಿಳಾಸಕ್ಕೆ ಖುದ್ದಾಗಿ, ಅಂಚೆ ಮೂಲಕ ಅಥವಾ ಇ–ಮೇಲ್ ಮಖಾಂತರವಾಗಲಿ ಜೂನ್ 10, 2020ರ ಸಂಜೆ 5.00 ಗಂಟೆ ಒಳಗಾಗಿ ನೀಡಬಹುದೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

### ಕರ್ನಾಟಕ ಲೋಕಸೇವಾ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರುಗಳಿಂದ

### ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ದೇಣಿಗೆ

ಬೆಂಗಳೂರು, ಮೇ 20 ( ಕರ್ನಾಟಕ ವಾರ್ತೆ )

ರಾಜ್ಯದಲ್ಲಿ ಕೊರೊನಾ ವೈರಸ್(ಕೋವಿಡ್–19) ಸಾಂಕ್ರಾಮಿಕವಾಗಿ ಹರಡುತ್ತಿರುವ ಸಂಬಂಧ ಇದರ ನಿರ್ಮೂಲನೆಗಾಗಿ ಸಮಸ್ತ ರಾಜ್ಯ ಸರ್ಕಾರಿ ನೌಕರರ ಮಾರ್ಚ್ 2020ರ ಮಾಹೆಯಲ್ಲಿ ಒಂದು ದಿನದ ಸಂಬಳವನ್ನು ಕಟಾವು ಮಾಡಿ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಜಮಾ ಮಾಡುವ ಸಂಬಂಧ ಸರ್ಕಾರ ಆದೇಶ ಹೊರಡಿಸಿದೆ. ಈ ಸಂಬಂಧ ಕರ್ನಾಟಕ ಲೋಕಸೇವಾ ಆಯೋಗದಲ್ಲಿನ ಅಧ್ಯಕ್ಷರು ಮತ್ತು ಸದಸ್ಯರುಗಳು ಸ್ವಯಂ ಪ್ರೇರಿತರಾಗಿ ಏಪ್ರಿಲ್ 2020 ಮಾಹೆಯ ವೇತನದಲ್ಲಿ ಒಂದು ವಾರದ ಸಂಬಳವನ್ನು ಕಟಾವು ಮಾಡಿಸಿ, ಮುಖ್ಯಮಂತ್ರಿಗಳ ಪರಿಹಾರ ನಿಧಿ ಕೋವಿಡ್–19 ಖಾತೆಗೆ ದೇಣಿಗೆ ನೀಡಿರುತ್ತಾರೆ

ಆಯೋಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ ಸಿಬ್ಬಂದಿಗಳು ಸ್ವಯಂ ಪ್ರೇರಿತರಾಗಿ ಮಾರ್ಚ್ 2020 ರ ಮಾಹೆಯ ವೇತನದಲ್ಲಿ ಒಂದು ದಿನದ ವೇತನವನ್ನು ಕಟಾವುಗೊಳಿಸಿ ಮಾನ್ಯ ಮುಖ್ಯಮಂತ್ರಿಗಳ ಪರಹಾರ ನಿಧಿ ಕೋವಿಡ್–19 ಖಾತೆಗೆ ದೇಣಿಗೆ ನೀಡಿರುತ್ತಾರೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಮೇ 19 ರಂದು ಸಾರಿಗೆ ಬಸ್ಸುಗಳಲ್ಲಿ ಒಟ್ಟು 53506 ಜನ ಪ್ರಯಾಣ

ಬೆಂಗಳೂರು, ಮೇ 20 ( ಕರ್ನಾಟಕ ವಾರ್ತೆ )

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಕಾರ್ಯಾಚರಣೆ ಪುನರಾರಂಭಿಸಿದೆ. 1500 ಬಸ್ಸುಗಳನ್ನು ಕಾರ್ಯಾಚರಣೆಗೊಳಿಸಬೇಕಾಗಿತ್ತು, ಆದರೆ ನಿಗಮದ ವ್ಯಾಪ್ತಿಯ ವಿಭಾಗಗಳಿಂದ ಮೇ 19 ರಂದು 1606 ಬಸ್ಸುಗಳನ್ನು ಕಾರ್ಯಾಚರಿಸಿ, ಒಟ್ಟು 53506 ಪ್ರಯಾಣಿಕರು ಪ್ರಯಾಣಿಸಿರುತ್ತಾರೆ.

ಬೆಂಗಳೂರಿನಿಂದ 213 ಬಸ್ಸುಗಳು ಹಾಗೂ 6000 ಪ್ರಯಾಣಿಕರು ರಾಜ್ಯದ ವಿವಿಧ ಜಿಲ್ಲೆಗಳಾದ ಶಿವಮೊಗ್ಗ, ಬಾಗಲಕೋಟೆ, ಬೆಳಗಾವಿ, ದಾವಣಗೆರೆ, ಮೈಸೂರು, ಹುಬ್ಬಳ್ಳಿ, ಶಿರಸಿ, ಮಂಗಳೂರು, ಬಳ್ಳಾರಿ, ರಾಯಚೂರು, ಹೊಸಪೇಟೆ, ಕಲಬುರಗಿ, ಚಿಕ್ಕಮಗಳೂರು, ಮಡಿಕೇರಿ, ಪ್ರಯಾಣಿಸಿರುತ್ತಾರೆ. ಪ್ರಯಾಣಿಕರು ಮುಂಗಡ ಟಿಕೇಟು ಕಾಯ್ದಿರಿಸಲು ಕೋರಿದೆ.

ಮುಂಗಡ ಬುಕಿಂಗ್ ವ್ಯವಸ್ಥೆ:

ಬೆಂಗಳೂರಿನಿಂದ: ಬಾಗಲಕೋಟೆ, ಬೆಳಗಾವಿ, ವಿಜಯಪುರ, ಬಳ್ಳಾರಿ, ಕುಂದಾಪುರ, ಚಿಕ್ಕಮಗಳೂರು, ದಾವಣಗೆರೆ, ಧಾರವಾಡ, ಕಲಬುರ್ಗಿ, ಹುಬ್ಬಳ್ಳಿ, ಹೊಸಪೇಟೆ, ಹಾವೇರಿ, ಹರಪ್ಪನಹಳ್ಳಿ, ಕೊಪ್ಪಳ, ಕಾರವಾರ, ಮಂಗಳೂರು, ಮಡಿಕೇರಿ, ಮೈಸೂರು, ರಾಯಚೂರು, ಶಿವಮೊಗ್ಗ, ಶಿರಸಿ, ವಿಜಯಪುರ, ಉಡುಪಿ, ಯಾದಗಿರಿ.

ಬೆಳಗಾವಿ, ಬಳ್ಳಾರಿ, ಕುಂದಾಪುರ, ಚಿಕ್ಕಮಗಳೂರು, ದಾವಣಗೆರೆ, ಕಲಬುರ್ಗಿ, ಗಂಗಾವತಿ, ಹುಬ್ಬಳ್ಳಿ, ಹಡಗಲಿ, ಹರಿಹರ, ಹೊಸಪೇಟೆ, ಕಂಪ್ಲಿ, ಕುಂದಾಪುರ, ಕುಮಟಾ, ಕೊಪ್ಪಳ, ಕುಷ್ಠಗಿ, ಮಂಗಳೂರು, ಮಡಿಕೇರಿ, ಮೈಸೂರು, ವಿಜಯಪುರ, ಸಂಡೂರು, ಶಿವಮೊಗ್ಗ, ಶಿರಗುಪ್ಪ, ಶಿರಸಿ, ಉಡುಪಿ, ಯಾದಗಿರಿ, ಯಲಬುರ್ಗ, ಯಲ್ಲಾಪುರ ದಿಂದ ಬೆಂಗಳೂರಿಗೆ.

ಪ್ರಯಾಣಿಕರು ಕೆ.ಎಸ್.ಆರ್.ಟಿ.ಸಿ. ವೆಬ್‌ಸೈಟ್ **www.ksrtc.in** ಮೂಲಕ ಅಥವಾ ನಿಗಮದ ಟಿಕೇಟು ಕೌಂಟರುಗಳು/ ಫ್ರಾಂಚೈಸಿ ಕೌಂಟರುಗಳ ಮೂಲಕ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಾಲ್ ಸೆಂಟರ್ ನಂಬರ್ **9449596666** ಸಂಪರ್ಕಿಸಲು ನಿಗಮದ ಪ್ರಕಟಣೆ ತಿಳಿಸಿದೆ.

## ಕೆ.ಎಸ್.ಆರ್.ಟಿ.ಸಿ. ಬಸ್ಸುಗಳ ಸಮಯ ಬದಲಾವಣೆ

ಬೆಂಗಳೂರು, ಮೇ 20 ( ಕರ್ನಾಟಕ ವಾರ್ತೆ )

ಕೆ.ಎಸ್.ಆರ್.ಟಿ.ಸಿ. ಬಸ್ಸುಗಳ ಸಂಚಾರವನ್ನು ಈ ಹಿಂದೆ ಬೆಳಿಗ್ಗೆ 7 ರಿಂದ ಪ್ರಾರಂಭಿಸಿ ಸಂಜೆ 7 ಗಂಟೆ ಒಳಗಾಗಿ ಸಂಚಾರವನ್ನು ಮುಕ್ತಾಯ ಮಾಡಲು ಆದೇಶಿಸಿತ್ತು. ಈ ಆದೇಶವನ್ನು ದಿನಾಂಕ 21-05-2020 ರಿಂದ ಮಾರ್ಪಡಿಸಲಾಗಿದೆ. ಅಂದರೆ ಕೊನೆಯ ಬಸ್ಸು ಸಂಜೆ 7 ಗಂಟೆಗೆ ಕೆಂಪೇಗೌಡ ಬಸ್ ನಿಲ್ದಾಣವನ್ನು ಬಿಡುವುದು. ಉದಾಹರಣೆಗೆ ಕಲುಬುರುಗಿ, ಬೀದರ್ ಸಂಜೆ 7 ಗಂಟೆಗೆ ಬೆಂಗಳೂರಿನಿಂದ ಹೊರಟು ನಾಡಿದ್ದು ಬೆಳಿಗ್ಗೆ ಕಲುಬುರಗಿ, ಬೀದರ್‌ಗೆ ತಲುಪುತ್ತದೆ.

ಇದು ಎಲ್ಲಾ ಸ್ಥಳಗಳಿಗೆ ಕಾರ್ಯಾಚರಣೆಯಾಗುವ ಬಸ್ಸುಗಳಿಗೂ ಅನ್ವಯಿಸುತ್ತದೆ. (ಬೆಂಗಳೂರು ಹಾಗೂ ಇತರೆ ಜಿಲ್ಲೆಗಳಿಂದ ಕಾರ್ಯಾಚರಣೆಯಾಗುವ ಬಸ್ಸುಗಳಿಗೂ ಅನ್ವಯವಾಗುವುದು) ಇದೇ ಮಾದರಿಯ ಬಸ್ಸುಗಳ ಕಾರ್ಯಾಚರಣೆಗಳನ್ನು ಮುಂದಿನ ಆದೇಶದವರೆಗೂ ಮುಂದುವರೆಸಲಾಗುವುದು ಎಂದು ಸಾರ್ವಜನಿಕ ಸಂಪರ್ಕಾಧಿಕಾರಿ ಕೆ.ಎಸ್.ಆರ್.ಟಿ.ಸಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆ. ಬಿ. ಯೋಗೇಶ್ವರಿ ಅವರಿಗೆ ಪಿಎಚ್‌ಡಿ ಪದವಿ

**ಬೆಂಗಳೂರು, ಮೇ 20 ( ಕರ್ನಾಟಕ ವಾರ್ತೆ )**

ಕುವೆಂಪು ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ಸ್ನಾತಕೋತ್ತರ ವಿಭಾಗದ ಸಂಶೋಧನಾರ್ಥಿ ಕೆ.ಬಿ. ಯೋಗೇಶ್ವರಿ ಅವರು ಸಲ್ಲಿಸಿದ ಮಹಾಪ್ರಬಂಧಕ್ಕೆ ಪಿಎಚ್‌ಡಿ ಪದವಿ ನೀಡಲಾಗಿದೆ. ಯೋಗೇಶ್ವರಿ ಅವರು ಅರ್ಥಶಾಸ್ತ್ರ ವಿಭಾಗದ ವಿಶ್ರಾಂತ ಪ್ರಾಧ್ಯಾಪಕ ಡಾ.ಟಿ.ಆರ್. ಮಂಜುನಾಥ್ ಮಾರ್ಗದರ್ಶನದಲ್ಲಿ ಸಲ್ಲಿಸಿದ 'ಮ್ಯಾನೇಜ್ಮೆಂಟ್ ಆಫ್ ನಾನ್ ಪರ್ಫಾರ್ಮಿಂಗ್ ಅಸ್ಸೆಟ್ಸ್ ಆಂಡ್ ಪ್ರಿಯಾರಿಟಿ ಸೆಕ್ಟರ್ ಲೆಂಡಿಂಗ್ ಬೈ ಅರ್ಬನ್ ಕೋ ಅಪರೇಟಿವ್ ಬ್ಯಾಂಕ್ ಇನ್ ಕರ್ನಾಟಕ ವಿಥ್ ಸ್ಪೆಶಲ್ ಪರಫಾರ್ಮೆನ್ಸ್ ಟು ಶಿವಮೊಗ್ಗ(ಡಿಸ್ಟ್ರಿಕ್ಟ್)' ಎಂಬ ಮಹಾ ಪ್ರಬಂಧಕ್ಕೆ ವಿಶ್ವವಿದ್ಯಾಲಯವು ಪಿಎಚ್ ಡಿ ನೀಡಿದೆ ಎಂದು ಪ್ರಕಟಣೆ ತಿಳಿಸಿದೆ.

## ಎಸ್ಸೆಸ್ಸೆಲ್ಸಿ 'ಚಂದನ' ಪುನರ್ಮನನ ತರಗತಿಗಳ ಉಪಯೋಗ ಪಡೆಯಿರಿ: ಸಚಿವ ಸುರೇಶ್‌ಕುಮಾರ್

**ಬೆಂಗಳೂರು, ಮೇ 20 ( ಕರ್ನಾಟಕ ವಾರ್ತೆ )**

ಎಸ್ಸೆಸ್ಸೆಲ್ಸಿ ಪರೀಕ್ಷೆಗೆ ದಿನಾಂಕ ನಿಗದಿಯಾದ ನಂತರ ವಿದ್ಯಾರ್ಥಿಗಳ ಮನಸ್ಥಿತಿ ಅರಿಯಲು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಬುಧವಾರವೂ ರಾಜ್ಯದ ವಿವಿಧೆಡೆಯ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳೊಂದಿಗೆ ದೂರವಾಣಿಯಲ್ಲಿ ಮಾತನಾಡವುದನ್ನು ಮುಂದುವರೆಸಿ ಪರೀಕ್ಷೆಗೆ ಸಜ್ಜಾಗಿರುವ ಕುರಿತಂತೆ ವಿಚಾರಿಸಿದರು.

ತಮ್ಮ ಕಚೇರಿಯಿಂದ ಬೆಳಗ್ಗೆಯಿಂದಲೇ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ, ರಾಮಗನರ ಶೈಕ್ಷಣಿಕ ಜಿಲ್ಲೆಗಳ 50ಕ್ಕೂ ಹೆಚ್ಚು ವಿದ್ಯಾರ್ಥಿಗಳೊಂದಿಗೆ ಮಾತನಾಡಿ, ಪರೀಕ್ಷೆಗೆ ಹೇಗೆ ತಯಾರಿ ನಡೆಸಿದ್ದೀರಿ ಎಂದು ಪ್ರಶ್ನಿಸಿ, ಕೊರೋನಾ ಹಿನ್ನೆಲೆಯಲ್ಲಿ ಪರೀಕ್ಷೆ ಈ ಬಾರಿ ಸ್ವಲ್ಪ ತಡವಾಗಿ ಆರಂಭವಾಗುತ್ತಿರುವುದಕ್ಕೆ ಬೇಜಾರು ಮಾಡಿಕೊಳ್ಳದೇ ಚೆನ್ನಾಗಿ ಓದಬೇಕು ಎಂದು ಸಲಹೆ ನೀಡಿದರು.

ಆರೋಗ್ಯದ ಕಡೆ ಹೆಚ್ಚಿನ ಗಮನ ನೀಡುವುದು ಸೇರಿದಂತೆ ದೂರದರ್ಶನ ಚಂದನ ವಾಹಿನಿಯಲ್ಲಿ ಪುನರ್ಮನನ ತರಗತಿಗಳನ್ನು ನೋಡುತ್ತಿದ್ದೀರಾ ಎಂದು ಪ್ರಶ್ನಿಸಿದರು. ಚಂದನ ವಾಹಿನಿಯಲ್ಲಿ ಕನ್ನಡ ಮತ್ತು

ಇಂಗ್ಲಿಷ್ ಮಾಧ್ಯಮದಲ್ಲಿ ಪುನರ್ಮನನ ತರಗತಿಗಳು ನಡೆಯುತ್ತಿದ್ದು, ಪ್ರತಿಯೊಬ್ಬರೂ ಅದರ ಸದುಪಯೋಗ ಪಡೆದುಕೊಳ್ಳಬೇಕೆಂದು ಸಲಹೆ ನೀಡಿದರು.

ಹಲವಾರು ವಿದ್ಯಾರ್ಥಿಗಳು ಈ ಸಮಯದಲ್ಲಿ ದೂರದರ್ಶನದಲ್ಲಿ ಬರುತ್ತಿರುವ ಪುನರ್ಮನನ ತರಗತಿಗಳಿಂದ ಹೆಚ್ಚಿನ ಉಪಯೋಗವಾಗುತ್ತಿದೆ ಎಂದು ತಿಳಿಸಿದಾಗ, ಕೊನೆಯ ಮೂರು ದಿನಗಳಲ್ಲಿ ಮೂರು ಸೆಟ್ ಮಾದರಿ ಪ್ರಶ್ನೆ ಪತ್ರಿಕೆಗಳನ್ನು ಉತ್ತರಿಸುವ ಪ್ರಯೋಗ ನಡೆಯಲಿದ್ದು, ಅದರ ಸದುಪಯೋಗಪಡಿಸಿಕೊಳ್ಳಬೇಕೆಂದು ಮಾರ್ಗದರ್ಶನ ನೀಡಿದರು.

ಕೆಂಗೇರಿ ಭಾಗದ ಗ್ರಾಮಾಂತರ ಪ್ರದೇಶದ ಮಂಜುಕುಮಾರಿ ಎಂಬ ವಿದ್ಯಾರ್ಥಿನಿಯೊಬ್ಬಳು ತಮ್ಮ ಮನೆಯಲ್ಲಿ ಟಿ.ವಿ.ಗೆ ಕರೆನ್ಸಿ ಹಾಕಿಸಿಲ್ಲವಾದ್ದರಿಂದ ತಾನು ಪುನರ್ಮನನ ತರಗತಿ ವೀಕ್ಷಿಸಲು ಸಾಧ್ಯವಾಗಿಲ್ಲ ಎಂದು ಹೇಳಿದ ಆ ಭಾಗದ ಶಿಕ್ಷಣ ಇಲಾಖೆ ಅಧಿಕಾರಿಗೆ ಫೋನಾಯಿಸಿದ ಸಚಿವರು, ವಿದ್ಯಾರ್ಥಿನಿಯ ಫೋನ್ ನಂಬರ್ ನೀಡಿದ್ದಲ್ಲದೇ ಆ ವಿದ್ಯಾರ್ಥಿನಿಗೆ ಚಂದನ ವಾಹಿನಿಯ ಪುನರ್ಮನನ ತರಗತಿ ವೀಕ್ಷಿಸಲು ಟಿ.ವಿ. ವ್ಯವಸ್ಥೆ ಮಾಡಿಕೊಡಲು ಸೂಚಿಸಿದರು.

ಸಚಿವರೊಂದಿಗೆ ಮಾತನಾಡಿದ ಎಲ್ಲ ವಿದ್ಯಾರ್ಥಿಗಳು ಕೊನೆಗೂ ಪರೀಕ್ಷಾ ವೇಳಾಪಟ್ಟಿ ಪ್ರಕಟಿಸಿದ್ದರಿಂದ ಖುಷಿಯಾಗಿದ್ದು, ನಿನ್ನೆಯಿಂದಲೇ ಪರೀಕ್ಷೆಗೆ ಗಂಭೀರವಾಗಿ ಓದುತ್ತಿರುವುದಾಗಿ ಹೇಳಿಕೊಂಡರು. ಪರೀಕ್ಷೆ ಕೊಠಡಿಗೆ ಸಂತೋಷದಿಂದ ತೆರಳಿ, ಮೊದಲು ಪ್ರಶ್ನೆ ಪತ್ರಿಕೆ ಓದಿಕೊಂಡು ನಂತರ ತಮಗೆ ಸುಲಭವೆನಿಸಿದ ಪ್ರಶ್ನೆಗಳಿಗೆ ಮೊದಲು ಉತ್ತರಿಸಿ ನಂತರ ಉಳಿದ ಪ್ರಶ್ನೆಗಳಿಗೆ ಉತ್ತರಿಸಲು ಪ್ರಯತ್ನಿಸಬೇಕು ಎಂದು ತಿಳಿಸಿದ ಸುರೇಶ್‌ಕುಮಾರ್, ಪರೀಕ್ಷೆ ಎಂದರೆ ಆಟವಿದ್ದಂತೆ ಎಂದು ಭಾವಿಸಿ ಸಂತೋಷದಿಂದ ಪರೀಕ್ಷಾ ಕೊಠಡಿಗೆ ತೆರಳುವಂತೆ ಸಚಿವರು ತಿಳಿಸಿದರು. ಹಾಗೆಯೇ ಕೊರೋನ ಹಿನ್ನೆಲೆಯಲ್ಲಿ ಪರೀಕ್ಷೆಗೆ ಕೈಗೊಂಡ ಸಿದ್ಧತೆಗಳನ್ನು ವಿವರಿಸಿ, ಆರೋಗ್ಯದ ಕಡೆ ಗಮನ ಹರಿಸಲು ಮತ್ತು ಸಾಮಾಜಿಕ ಅಂತರ ಪಾಲಿಸಬೇಕೆಂದು ಹೇಳಿದರು.

ಬೆಂಗಳೂರಿನ ಸಾರಕ್ಕಿ ಭಾಗದ ಪ್ರದೀಪ್ ಎಂಬ ವಿದ್ಯಾರ್ಥಿ ಅಂಗಡಿಯಲ್ಲಿ ಕೆಲಸ ಮಾಡುತ್ತಲೇ ಓದಿಕೊಳ್ಳುತ್ತಿರುವುದಾಗಿ ತಿಳಿಸಿದ. ತನ್ನ ತಾಯಿ ಮನೆಗೆಲಸ ಮಾಡಿ ಜೀವನ ಮಾಡುತ್ತಿರುವುದರಿಂದ ತಾನು ತನ್ನ ವಿದ್ಯಾಭ್ಯಾಸದ ಖರ್ಚಿಗಾಗಿ ತಾನು ಓದಿಕೊಳ್ಳುತ್ತಲೇ ಪ್ರತಿದಿನ 200 ರೂ. ಸಂಪಾದಿಸುತ್ತಿರುವುದಾಗಿ ತಿಳಿಸಿದ. ಮುಂದೆ ನಿನಗೆ ಬೇರೆ ರೀತಿಯಲ್ಲಿ ಸಹಾಯ ಮಾಡಿದರಾಯಿತು, ಪರೀಕ್ಷೆ ಮುಗಿಯುವ ತನಕ ವಿದ್ಯಾಭ್ಯಾಸದ ಕಡೆ ಹೆಚ್ಚಿನ ಗಮನಹರಿಸಬೇಕೆಂದು ಸಲಹೆ ನೀಡಿದರು.

ಹಾಗೆಯೇ ನಿಮ್ಮ ಸ್ನೇಹಿತರಾರಾದರೂ ತಮ್ಮ ಶಾಲೆಯಿಂದ ದೂರದ ಊರಿನಲ್ಲಿದ್ದರೆ, ಅವರಿಗೆ ಹತ್ತಿರದ ಪರೀಕ್ಷಾ ಕೇಂದ್ರಕ್ಕೆ ಬದಲಾಯಿಸಿಕೊಂಡು ಅವರು ಇರುವ ಊರಿನ ಸಮೀಪದಲ್ಲೇ ಪರೀಕ್ಷೆ ಬರೆಯಲು ಅವಕಾಶ ಇರುವ ಕುರಿತು ತಿಳಿಸಬೇಕೆಂದೂ ಸುರೇಶ್ ಕುಮಾರ್ ಸಲಹೆ ನೀಡಿದರು.

## ಸಚಿವರ ಪ್ರವಾಸ

**ಬೆಂಗಳೂರು, ಮೇ 20 ( ಕರ್ನಾಟಕ ವಾರ್ತೆ )**

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಅವರು ಮೇ 21ರಂದು ಚಾಮರಾಜನಗರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರ ಸ್ಥಾನಕ್ಕೆ ಹಿಂದಿರುಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಬೆಂಗಳೂರು ಒನ್ ಕೇಂದ್ರಗಳು ಪುನರಾರಂಭ

**ಬೆಂಗಳೂರು, ಮೇ 20 ( ಕರ್ನಾಟಕ ವಾರ್ತೆ )**

ಕೋವಿಡ್ 19 ಲಾಕ್ ಡೌನ್ ಹಿನ್ನಲೆಯಲ್ಲಿ ಮುಚ್ಚಲಾಗಿದ್ದ ಬೆಂಗಳೂರು ಒನ್ ಸಮಗ್ರ ನಾಗರಿಕ ಸೇವಾ ಕೇಂದ್ರಗಳು ಕನ್ಟೈನ್ಮೆಂಟ್ ಪ್ರದೇಶಗಳನ್ನು ಹೊರತು ಪಡಿಸಿ ಬೆಂಗಳೂರಿನ ಉಳಿದ ವಾರ್ಡ್‌ಗಳಲ್ಲಿ ಪುನರಾಂಭಗೊಂಡಿವೆ. ನಾಗರೀಕರು ಈ ಸೇವೆಗಳನ್ನು ಬಳಸಿಕೊಳ್ಳಲು ವಿದ್ಯುನ್ಮಾನ ನಾಗರಿಕ ಸೇವಾ ವಿತರಣಾ ನಿರ್ದೇಶನಾಲಯ ಪ್ರಕಟಣೆ ತಿಳಿಸಿದೆ.

## Bangalore One Centres Re-opened

**Bengaluru May 20 (Karnataka Information)**

**Bangalore One integrated Citizen Service centers which were closed down due to Covid-19 Lock down are re-opened in all the wards of Bangalore except Containment Zones. Citizens are requested to avail the services of Bangalore One centers says Directorate of Electronic Delivery Of Citizen Services.**

**ನೀರಿನ ಬಿಲ್ ಪಾವತಿಯ** ಹಾಗೂ ಕಾಲರಾ ತಡೆಗಟ್ಟುವ ನಿಟ್ಟಿನಲ್ಲಿ ಬೆಂಗಳೂರು ಜಲಮಂಡಳಿಯ ವತಿಯಿಂದ ಕೈಗೊಂಡ ದೈನಂದಿನ ಕ್ರಮಗಳು

*********

ಬೆಂಗಳೂರು ಜಲಮಂಡಳಿಯು ನೀರು ಸರಬರಾಜು ಕೊಳವೆಯಲ್ಲಿ ಸೋರುವಿಕೆಯನ್ನು ಸಾರ್ವಜನಿಕರಿಂದ ಅಥವಾ ಮಂಡಳಿಯ ಸಿಬ್ಬಂದಿಯವರು ಗುರುತಿಸಿದ ತಕ್ಷಣ ಸೋರುವಿಕೆ ತಡೆಗಟ್ಟಲು ಕ್ರಮವಹಿಸಲಾಗುತ್ತದೆ. ಇದಲ್ಲದೆ ಕಲುಷಿತ ನೀರು ಸರಬರಾಜಾಗುತ್ತಿದ್ದಲ್ಲಿ ತಕ್ಷಣ ಕ್ರಮವಹಿಸಿ ಕಲುಷಿತ ನೀರು ಸರಬರಾಜು ಕೊಳವೆಗೆ ಸೇರದಂತೆ ಕೂಡಲೇ ಕಾರ್ಯ ಪ್ರವೃತ್ತರಾಗಿ ಕ್ರಮವಹಿಸಲಾಗುತ್ತದೆ. **ಕಾಲರಾ ಮತ್ತು ಜಿ.ಇ**. ಗೆ ಸಂಬಂಧಿಸಿದ ಮಾಹಿತಿಯನ್ನು ಸಾಂಕ್ರಾಮಿಕ ರೋಗಗಳ ಆಸ್ಪತ್ರೆಯಿಂದ ದಿನಾಂಕ 01.05.2020 ರಿಂದ 18.05.2020 ರವರೆಗೆ ನೋಂದಣಿಯಾದ ಪ್ರಕರಣಗಳ ವಿಳಾಸವನ್ನು ಪಡೆದು ಅಂತಹ ಸ್ಥಳಗಳಿಂದ ನೀರಿನ ಮಾದರಿಯನ್ನು ಸಂಗ್ರಹಿಸಲಾಗಿ, ಕ್ರೋಢೀಕರಿಸಿದ ಫಲಿತಾಂಶದ ಸಂಪೂರ್ಣ ವಿವರವನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿರುವುದು. ಫಲಿತಾಂಶದ ಸಂಕ್ಷಿಪ್ತ ವಿವರ ಈ ಕೆಳಕಂಡಂತಿದೆ.

ದಿನಾಂಕ 01.05.2020 ರಿಂದ 18.05.2020 ರವರೆಗೆ ದಾಖಲುಗೊಂಡ ಒಟ್ಟು 40 ನೀರಿನ ಮಾದರಿಯನ್ನು ಸಂಗ್ರಹಿಸಿದ್ದು, 01 ಮಾದರಿಗೆ ಸಂಬಂಧಿಸಿದ ಪ್ರದೇಶಗಳಲ್ಲಿ ನೀರು ಸರಬರಾಜು ಇಲ್ಲದಿದ್ದ ಕಾರಣ ನೀರಿನ ಮಾದರಿಯನ್ನು ಸಂಗ್ರಹಿಸಿರುವುದಿಲ್ಲ, 33 ಮಾದರಿಗೆ ಸಂಬಂಧಿಸಿದ ನೀರಿನ ಮಾದರಿಗಳನ್ನು ಸಂಗ್ರಹಿಸಲಾಗಿದ್ದು, 32 **ಮಾದರಿಗಳ ಫಲಿತಾಂಶವು ಕುಡಿಯಲು ಯೋಗ್ಯವಾಗಿರುತ್ತದೆ**. 01 ಮಾದರಿಗಳ ಫಲಿತಾಂಶಗಳು ನಿರೀಕ್ಷಣೆಯಲ್ಲಿರುತ್ತದೆ. ಉಳಿದ 06 ಮಾದರಿಗಳಿಗೆ ಸಂಬಂಧಿಸಿದ ಪ್ರದೇಶಗಳು ಜಲ ಮಂಡಳಿಯ ವ್ಯಾಪ್ತಿಗೆ ಒಳಪಟ್ಟಿರುವುದಿಲ್ಲ.

**ನೀರಿನ ಬಿಲ್ ಪಾವತಿಯನ್ನು ಮಂಡಳಿಯ ವೆಬ್‌ಸೈಟ್ ಮುಖಾಂತರ ಮಾಡಬಹುದಾಗಿರುತ್ತದೆ ಹಾಗೂ ಮಂಡಳಿಯ ಆ್ಯಪ್ ಆಗಿರುವ "BWSSB Payment App" ಮುಖಾಂತರ Quick Pay ಮಾಡಬಹುದಾಗಿರುತ್ತದೆ. ಮಂಡಳಿಯ ವೆಬ್‌ಸೈಟ್‌ನಲ್ಲಿ "BWSSB Payment App" ನ ಲಿಂಕ್ ಲಭ್ಯವಿದ್ದು, Google Play store ನಲ್ಲಿಯೂ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ. ಆನ್‌ಲೈನ್ ಪೇಮೆಂಟ್ ಸೇವೆಗಳಾದ BBPS(Bharat Bill Payment System)ನಿಂದ ಲಭ್ಯವಿರುವ Paytm, Phone-Pe, Google Pay, ಮುಖಾಂತರವಾಗಿಯೂ ನೀರಿನ ಬಿಲ್ ಪಾವತಿಯನ್ನು ಮಾಡಬಹುದಾಗಿರುತ್ತದೆ. ಅಲ್ಲದೆ ಜಲಮಂಡಳಿ ಕಛೇರಿಗಳ ಆವರಣದಲ್ಲಿರುವ ಕಿಯೋಸ್ಕ್ ಮಿಷನ್‌ಗಳಲ್ಲಿ ಹಾಗೂ ಬೆಂಗಳೂರು ಒನ್ ಸೇವಾ ಕೇಂದ್ರದ ಮುಖಾಂತರವೂ ಸಹ ಹಣ ಪಾವತಿ ಮಾಡಬಹುದಾಗಿರುತ್ತದೆ. ಗ್ರಾಹಕರು ಇದರ ಸದುಪಯೋಗಪಡಿಸಿಕೊಳ್ಳಲು ಕೋರಲಾಗಿದೆ.**

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ಸಹಾಯವಾಣಿಯ ಸಂಖ್ಯೆ:22238888 ಹಾಗೂ 1916 ಮತ್ತು ವಾಟ್ಸ್‌ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ. ತಮ್ಮ ಸಮೀಪದ ಸೇವಾಠಾಣೆಯ ದೂರವಾಣಿ ಸಂಖ್ಯೆಯನ್ನು ಮಂಡಳಿಯ ಅಧಿಕೃತ ವೆಬ್‌ಸೈಟ್:www.bwssb.gov.in ನಲ್ಲಿ ಪಡೆಯಬಹುದಾಗಿರುತ್ತದೆ.

## Publishing the details about steps taken to prevent cholera and water bill payment

BWSSB immediately take action to stop the leakage as soon as water leakages are detected and reported from public or from staff of BWSSB. Adding to this, if contamination of water is detected it is taken care that contaminated water does not get in contact to the water supply pipe lines. BWSSB collected address of the cases reported about Cholera and GE from Health & Family Welfare Department, Government Epidemic Disease Hospital, Bangalore, 01.05.2020 to 18.05.2020 tested the samples and results of the samples are enclosed with this letter. The abstract of the result is as mentioned below.

Among the 40 cases reported from 01.05.2020 to 18.05.2020, samples from 01 area was not collected since water supply for that area was not on the day when the water sample were collected, samples from 33 area were collected and result of **32 sample was obtained as suitable for potable purpose(SPP)**. Result of 1 sample is awaited. The areas of remaining 06 cases does not comes under BWSSB limits.

**All consumers are requested to make payment through the BWSSB official website: www.bwssb.gov.in. BWSSB's App called "BWSSB Payment App" is also available and Quick Pay can be made through this app. Customers can login to the app via the link provided in BWSSB official website and app can also be downloaded from Google pay store. Payment can also be made through online services of BBPS (Bharath Bill Payment**

**System)  like Paytm, Phone pe, Google pay etc**. and in Bangalore one  and  KIOSK Machines at BWSSB Office Premises.

It is also informed that BWSSB Call center number 080-22238888 is available 24/7 to receive the complaint of customers. Along with this, whatsapp number:8762228888  and toll free number 1916 is also available. Service station address and contact details can be obtained through BWSSB official **website :www.bwssb.gov.in .**